**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.10.2026 / 18.40 hrs**

---

ಮುಖ್ಯಾಂಶಗಳು

೧. ಮೈಸೂರು ದಸರಾ ಪೂರ್ವಜರು ನೀಡಿರುವ ಸಂಸ್ಕೃತಿ, ಪರಂಪರೆಯ ಪ್ರತೀಕ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣ್ಣನೆ

೨. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನವರಾತ್ರಿ ದಸರಾ ಸಂಭ್ರಮ ಆರಂಭ

೩. ನ್ಯಾಯ ಮತ್ತು ಪಾರದರ್ಶಕ ರೀತಿಯಲ್ಲೇ ತೀವ್ರ ಮತಪಟ್ಟಿ ಪರಿಷ್ಕರಣೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟನೆ

೪. ಪ್ರಧಾನ ಮಂತ್ರಿ ಧನಧಾನ್ಯ ಯೋಜನೆ ಅನುಷ್ಠಾನ ; ತುಮಕೂರು ಜಿಲ್ಲೆಗೆ ರಾಜ್ಯದಲ್ಲೇ ಅಗ್ರಸ್ಥಾನ

೫. ರಣಜಿ ಟ್ರೋಫಿ ; ಆಂಧ್ರ ವಿರುದ್ಧ ಮೊದಲ ಇನ್ನಿಂಗ್ಸ್‌ನಲ್ಲಿ ೨೭೪ ರನ್ ಮಾಡಿದ ಕರ್ನಾಟಕ

---

ಮೈಸೂರು ದಸರಾ ಕೇವಲ ಉತ್ಸವವಲ್ಲ, ಪೂರ್ವಜರು ನೀಡಿರುವ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಮೈಸೂರಿನಲ್ಲಿ ದಸರಾ ಉದ್ಘಾಟನಾ ಕಾರ್ಯಕ್ರಮದ ಬಳಿಕ ಮಾತನಾಡಿದ ಅವರು, ದಸರಾ ನಾವು ಎಲ್ಲರೂ ಒಗ್ಗಟ್ಟಿನಿಂದ ಮುನ್ನಡೆಯುತ್ತಿದ್ದೇವೆ ಎಂಬ ಸಂದೇಶ ಸಾರುವ ಹಬ್ಬವಾಗಿದೆ ಎಂದರು. ಮೈಸೂರಿನ ಸಂಸ್ಕೃತಿ ಎಲ್ಲರ ಕೊಡುಗೆಯಿಂದ ರೂಪುಗೊಂಡಿದೆ. ಯುದ್ಧ ಮತ್ತು ಹೋರಾಟಗಳಿಂದ ಕೆಲವು ನಗರಗಳು ಬೆಳೆದಿದ್ದರೆ, ಮೈಸೂರು ತನ್ನ ಸಂಸ್ಕೃತಿಯಿಂದ ಬೆಳೆದಿದೆ ಎಂದು ಹೇಳಿದರು.

ಮೈಸೂರಿನ ಸಂಪತ್ತು ಅರಮನೆ ಮಾತ್ರವಲ್ಲ. ಅರಮನೆಯ ಮೇಲಿನ ಜನರ ನಂಬಿಕೆಯೂ ಮೈಸೂರಿನ ಪ್ರಮುಖ ಸಂಪತ್ತು ಎಂದು  ತಿಳಿಸಿದರು. ಮೈಸೂರು ಇದೀಗ ಹೊಸ ಬ್ರ್ಯಾಂಡ್‌ನತ್ತ ಹೆಜ್ಜೆ ಇಡುತ್ತಿದ್ದು, ಈ ಬಾರಿಯ ದಸರಾ ಮೆರವಣಿಗೆ ವಿಶೇಷವಾಗಿರಲಿದೆ ಎಂದರು.

ಕಂಬಳಕ್ಕೆ ಕ್ರೀಡೆಯನ್ನು ಕಲೆ ಮತ್ತು ಸಂಸ್ಕೃತಿಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ದಸರಾ ಕಾರ್ಯಕ್ರಮದಲ್ಲಿ ಆಯೋಜಿಸಲಾಗಿದೆ. ಈ ಬಾರಿಯ ದಸರಾ ಮೆರವಣಿಗೆಯಲ್ಲಿ ಭೂಸೇನೆ,

ವಾಯುಸೇನೆ ಮತ್ತು ನೌಕಾಪಡೆಯ ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಮುಂದಿನ ೧೧ ದಿನಗಳ ಕಾಲ ದೇಶ-ವಿದೇಶಗಳಿಂದ ಜನರು ಮೈಸೂರು ದಸರಾ ಮೂಲಕ ಸಂಸ್ಕೃತಿಯನ್ನು ವೀಕ್ಷಿಸಲಿದ್ದಾರೆ. ಚಾಮುಂಡೇಶ್ವರಿ ತಾಯಿ ಎಲ್ಲರಿಗೂ ಆಶೀರ್ವಾದ ನೀಡಲಿ. ಜನರ ಕೃಪೆ ತಮ್ಮ ಸರ್ಕಾರದ ಮೇಲೂ ಇರಲಿ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಶಿಸಿದರು.

ಇದಕ್ಕೂ ಮುನ್ನ ಚಾಮುಂಡಿ ಬೆಟ್ಟದಲ್ಲಿ  ಕೊಪ್ಪಳ ಗವಿ ಮಠದ ಅಭಿನವ ಶ್ರೀ ಗವಿ ಸಿದ್ದೇಶ್ವರ ಸ್ವಾಮೀಜಿಯವರು ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ಮೈಸೂರು ದಸರಾ ಉತ್ಸವಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಾಡಿನ ಸಮೃದ್ಧಿ, ಶಾಂತಿ ಮತ್ತು ಒಳಿತಿಗಾಗಿ ತಾಯಿ ಚಾಮುಂಡೇಶ್ವರಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು. ಕೊಪ್ಪಳ ಜಿಲ್ಲೆಯ ಕುಮ್ಮಟ ದುರ್ಗದಿಂದ ಆರಂಭವಾದ ದಸರಾ, ತುಂಗಭದ್ರಾ ತೀರದಿಂದ ಕಾವೇರಿ ತೀರಕ್ಕೆ ಹರಿದುಬಂದಿದೆ ಎಂದರು.

ಮೈಸೂರಿನ ಮಹಾರಾಜ ಕಾಲೇಜಿನ ಮೈದಾನದಲ್ಲಿ ಆಯೋಜಿಸಲಾಗಿರುವ ಆಹಾರ ಮೇಳಕ್ಕೆ ಸಚಿವ ರಿಜ್ವಾನ್ ಅರ್ಷದ್ ಚಾಲನೆ ನೀಡಿದರು. ಇದೇ ೨೫ರವರೆಗೆ ಆಹಾರ ಮೇಳ ನಡೆಯಲಿದ್ದು, ಒಟ್ಟು ೧೪೦ ಮಳಿಗೆಗಳು ಇದರಲ್ಲಿ ಪಾಲ್ಗೊಂಡಿವೆ.

ಮೈಸೂರಿನ ಲಿಂಗಾಂಬೂಧಿ ಸಸ್ಯ ಶಾಸ್ತ್ರೀಯ ತೋಟದಲ್ಲಿ ನಿರ್ಮಿಸಿರುವ ಪುಷ್ಪ ಮೇಳ ಮತ್ತು ಸಸ್ಯ ತೋಟ ಭೇಟಿ ಕಾರ್ಯಕ್ರಮಕ್ಕೆ ಜಿಲ್ಲಾಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಚಾಲನೆ ನೀಡಿದರು.

---

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ವಿಶ್ವವಿಖ್ಯಾತ ನಾಡಹಬ್ಬ ದಸರಾ ಉತ್ಸವದ ಸಂಭ್ರಮ ಮನೆ ಮಾಡಿದ್ದು, ರಾಜವಂಶಸ್ಥರಿಂದ ಅರಮನೆಯಲ್ಲಿ ಖಾಸಗಿ ದರ್ಬಾರ್ ಸೇರಿದಂತೆ ಧಾರ್ಮಿಕ ಕಾರ್ಯಗಳು ಮತ್ತು ವಿಶೇಷ ಪೂಜಾಕಾರ್ಯಗಳು ಆರಂಭವಾಗಿವೆ.

ನವರಾತ್ರಿ ಮೊದಲ ದಿನವಾದ ಇಂದು ಬೆಳಗ್ಗೆ ದರ್ಬಾರ್ ಹಾಲ್‌ನಲ್ಲಿದ್ದ ಸಿಂಹಾಸನಕ್ಕೆ ಸಿಂಹದ ತಲೆ ಜೋಡಣೆ ಮಾಡಲಾಯಿತು. ಬಳಿಕ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹಾಗೂ ತ್ರಿಷಿಕಾಕುಮಾರಿ ಒಡೆಯರ್ ಅವರಿಗೆ ಕಂಕಣಧಾರಣೆ ಮಾಡಲಾಯಿತು.

ಪೂಜಾ ಕಾರ್ಯದ ನಂತರ ಪಟ್ಟದ ಆನೆಗಳಾದ ಶ್ರೀಕಂಠ, ಪಟ್ಟದ ನಿಶಾನೆ ಆನೆ ಏಕಲವ್ಯ, ಪಟ್ಟದ ಕುದುರೆ, ಪಟ್ಟದ ಹಸು, ಒಂಟೆ, ಸವಾರಿ ತೊಟ್ಟಿಗೆ ಕರೆತರಲಾಯಿತು.

ಸಿಂಹಾಸನಾರೋಹಣಕ್ಕೂ ಮುನ್ನ ಕಳಸ, ಸಿಂಹಾಸನ ಪೂಜೆ ಜರುಗಿತು. ನಂತರ ರಾಜವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ರತ್ನ ಖಚಿತ ಸಿಂಹಾಸನವೇರಿ ಖಾಸಗಿ ದರ್ಬಾರ್ ಆರಂಭಿಸಿದರು.

---

ರಾಜ್ಯಾದ್ಯಂತ ಇಂದು ನವರಾತ್ರಿ ಹಾಗೂ ದಸರಾ ಸಂಭ್ರಮ ಆರಂಭವಾಗಿದೆ.

ಕರಾವಳಿಯ ಧಾರ್ಮಿಕ ಹಾಗೂ ಸಾಂಸ್ಕೃತಿಕ ಹೆಮ್ಮೆಯ ಪ್ರತೀಕವಾದ ಐತಿಹಾಸಿಕ ಮಂಗಳೂರು ದಸರಾ ಮಹೋತ್ಸವಕ್ಕೆ ಮಂಗಳೂರಿನ ಕುದ್ರೋಳಿ ಶ್ರೀಗೋಕರ್ಣನಾಥ ಕ್ಷೇತ್ರದಲ್ಲಿ ಇಂದು ಶಾಸ್ತ್ರೋಕ್ತ ವಿಧಿವಿಧಾನಗಳೊಂದಿಗೆ ಚಾಲನೆ ದೊರೆಯಿತು. ಕುದ್ರೋಳಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ನಿರ್ಮಿಸಲಾದ ದರ್ಬಾರ್ ಮಂಟಪದಲ್ಲಿ ಗಣೇಶ ಹಾಗೂ ಶಕ್ತಿ ದೇವತೆಗಳ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗಿದೆ.

ಮಡಿಕೇರಿ ಮತ್ತು ಗೋಣಿಕೊಪ್ಪಲುವಿನಲ್ಲಿ ನಾಡಹಬ್ಬ ದಸರಾ ಸಂಭ್ರಮ ಕಂಡುಬಂದಿದೆ. ಜಿಲ್ಲಾ ಉಸ್ತುವಾರಿ ಸಚಿವ ಪಿ.ಎಂ.ನರೇಂದ್ರಸ್ವಾಮಿ ಮಡಿಕೇರಿಯಲ್ಲಿ ನಾಲ್ಕು ಶಕ್ತಿ ದೇವತೆಗಳ ಕರಗಗಳಿಗೆ ಸಾಂಪ್ರದಾಯಿಕ ಪೂಜೆ ನೆರವೇರಿಸಿದರು.

ಶಿವಮೊಗ್ಗ ದಸರಾ ಮಹೋತ್ಸವಕ್ಕೆ ಕೋಟೆ ಶ್ರೀ ಚಂಡಿಕಾ ದುರ್ಗಾಪರಮೇಶ್ವರಿ ದೇವಸ್ಥಾನದಲ್ಲಿ ಚಾಲನೆ ನೀಡಲಾಯಿತು. ನವರಾತ್ರಿ ಸಾಂಸ್ಕೃತಿಕ ವೈಭವ ಕಾರ್ಯಕ್ರಮನ್ನು ಹಿರಿಯ ನಟ ಶ್ರೀನಾಥ್ ದೀಪ ಬೆಳಗಿ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿವಮೊಗ್ಗ ನಗರ ಕ್ಷೇತ್ರದ ಶಾಸಕ ಎಸ್.ಎನ್. ಚನ್ನಬಸಪ್ಪ ವಹಿಸಿದ್ದರು. ಸಂಸದ ಬಿ.ವೈ. ರಾಘವೇಂದ್ರ, ಇತರ ಪ್ರಮುಖ ಗಣ್ಯರು ಉಪಸ್ಥಿತರಿದ್ದರು.

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದಾಂಬೆ ದೇವಾಲಯ ಹೊರನಾಡು ಅನ್ನಪೂರ್ಣೇಶ್ವರಿ ದೇವಾಲಯಗಳಲ್ಲಿ ನವರಾತ್ರಿ ಮಹೋತ್ಸವ ಇಂದಿನಿಂದ ಆರಂಭಗೊಂಡಿದೆ. ಶೃಂಗೇರಿಯಲ್ಲಿ ಇಂದಿನಿಂದ ಇದೇ ೨೧ರವರೆಗೆ, ಹೊರನಾಡಿನಲ್ಲಿ ಇಂದಿನಿಂದ ಇದೇ ೨೪ರವರೆಗೆ ಉತ್ಸವ ನಡೆಯಲಿದೆ. ಶೃಂಗೇರಿಯಲ್ಲಿ ಪ್ರತಿ ನಿತ್ಯ ಶಾರದಂಬೆಗೆ ವಿಶೇಷ ಅಲಂಕಾರ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇನ್ನು ಪ್ರತಿ ವರ್ಷ ಬಾಳೆಹೊನ್ನೂರು ರಂಭಾಪುರಿ ಮಠದಿಂದ ಜರುಗುವ ಶರವನ್ನರಾತ್ರಿ ದಸರಾ ಮಹೋತ್ಸವವು ಈ ವರ್ಷ ಬಾಗಲಕೋಟೆ ಜಿಲ್ಲೆಯ ಜಮಖಂಡಿ ಪಟ್ಟಣದಲ್ಲಿ ಇಂದಿನಿಂದ ಆರಂಭಗೊಂಡಿದೆ.

---

ಕಾಂಗ್ರೆಸ್ ಪಕ್ಷ ದೇಶದಲ್ಲಿ ಎಸ್‌ಐಆರ್ ನೆಪದಲ್ಲಿ ಅರಾಜಕತೆ ಸೃಷ್ಟಿಸಲು ಯತ್ನಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ.

ಅವರು ಹುಬ್ಬಳ್ಳಿಯಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿ, ದೆಹಲಿಯಲ್ಲಿ ನಿನ್ನೆಯ ಪ್ರತಿಭಟನೆ ನ್ಯಾಯಸಮ್ಮತ ಹೋರಾಟ ಆಗಿರಲಿಲ್ಲ. ಬದಲಿಗೆ ಅರಾಜಕತೆ ಸೃಷ್ಟಿಸಲು ಮಾಡಿದ ಯತ್ನ ಎಂದು ಪ್ರತಿಕ್ರಿಯಿಸಿದರು.

ಎಸ್‌ಐಆರ್ ನ್ಯಾಯ ಮತ್ತು ಅತ್ಯಂತ ಪಾರದರ್ಶಕ ಪದ್ಧತಿಯಲ್ಲಿ ನಡೆಯುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟಪಡಿಸಿದರು.

---

ಪ್ರಧಾನ ಮಂತ್ರಿ ಧನ್-ಧಾನ್ಯ ಕೃಷಿ ಯೋಜನೆ ಇಂದಿಗೆ ಒಂದು ವರ್ಷ ಪೂರೈಸಿದೆ. ದೇಶಾದ್ಯಂತ ೧೦೦ ಮಹತ್ವಾಕಾಂಕ್ಷೆಯ  ಜಿಲ್ಲೆಗಳಲ್ಲಿ ಕೃಷಿಯನ್ನು ಬಲಪಡಿಸಲು ಈ ಯೋಜನೆಯನ್ನು ಪ್ರಾರಂಭಿಸಲಾಗಿದೆ.

ಯೋಜನೆಯಡಿ ತುಮಕೂರು, ಚಿತ್ರದುರ್ಗ, ಕೊಪ್ಪಳ, ಚಿಕ್ಕಬಳ್ಳಾಪುರ, ಗದಗ ಮತ್ತು ಹಾವೇರಿ ಜಿಲ್ಲೆಗಳು ಆಯ್ಕೆಯಾಗಿದ್ದು, ಇವುಗಳಲ್ಲಿ ಯೋಜನೆ ಅನುಷ್ಠಾನದಲ್ಲಿದೆ.

ಕೃಷಿ ಉತ್ಪಾದನೆ ಮತ್ತು ಕೃಷಿ ವೈವಿಧ್ಯತೆ ಹೆಚ್ಚಿಸುವ ನಿಟ್ಟಿನಲ್ಲಿ ಪ್ರಾರಂಭಿಸಲಾಗಿರುವ ಪ್ರಧಾನ ಮಂತ್ರಿ ಧನಧಾನ್ಯ ಯೋಜನೆಯನ್ನು ತುಮಕೂರು ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನ ಮಾಡಲಾಗಿದೆ.

ಜಿಲ್ಲೆಯಲ್ಲಿ ಕೃಷಿ ವೈವಿಧ್ಯತೆ ಹಾಗೂ ಉತ್ಪಾದನೆ ಹೆಚ್ಚಾಗಿದ್ದು, ಕಳೆದ ಜುಲೈ ತಿಂಗಳಲ್ಲಿ ನಡೆಸಿದ ಪ್ರಗತಿಯಲ್ಲಿ ತುಮಕೂರು ಜಿಲ್ಲೆ ದೇಶದಲ್ಲಿಯೇ ಒಂಭತ್ತನೇ ಸ್ಥಾನ ಹಾಗೂ ರಾಜ್ಯದಲ್ಲಿಯೇ ಒಂದನೇ ಸ್ಥಾನದಲ್ಲಿದೆ.

ಕೃಷಿ ಇಲಾಖೆಯಿಂದ ಹನಿ ನೀರಾವರಿ, ಸ್ಪಿಂಕ್ಲರ್, ಕೃಷಿ ಯಾಂತ್ರಿಕರಣ, ಸಾವಯವ ಕೃಷಿಯ ಅಳವಡಿಕೆಯಿಂದಾಗಿ ತೆಂಗು ಮತ್ತು ಅಡಿಕೆ ನಡುವೆ ಅಂತರ ಬೆಳೆಯಾಗಿ ೩೦ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ನಡೆದಿದೆ ಎಂದು ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ್ ಕಳ್ಳನವರ್ ತಿಳಿಸಿದ್ದಾರೆ.

---

’ಜನ ಸೇವೆಯಿಂದ ದೇಶ ಸೇವೆ’ ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ ’ವಿಕಸಿತ ಭಾರತ’ ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ

ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ೨ ಕುರಿತ ಒಂದು ವರದಿ ಇಲ್ಲಿದೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್ ಎರಡನ್ನು ೨೦೨೨ ರ ನವೆಂಬರ್ ೧೧ರಂದು ತೆರೆಯಲಾಯಿತು ಮತ್ತು ಬೆಂಗಳೂರಿನ ವಾರ್ಷಿಕ ಪ್ರಯಾಣಿಕರ ಸಾಮರ್ಥ್ಯವನ್ನು ಸುಮಾರು ೨.೫ ಕೋಟಿಯಿಂದ ಐದರಿಂದ ಆರು ಕೋಟಿಗೆ ದ್ವಿಗುಣಗೊಳಿಸಿತು. ೧೦ ಸಾವಿರ ಚದರ ಮೀಟರ್ ಗಿಂತ ಹೆಚ್ಚು ಹಸಿರು ಗೋಡೆಗಳು, ತೂಗು ಉದ್ಯಾನಗಳು ಮತ್ತು ಹೊರಾಂಗಣ ಉದ್ಯಾನಗಳು ಶೇಕಡಾ ೧೦೦ರಷ್ಟು ನವೀಕರಿಸಬಹುದಾದ ಇಂಧನದಿಂದ ಚಲಿಸುವ ಕ್ಯಾಂಪಸ್ ಅನ್ನು ಸುತ್ತುವರೆದಿವೆ.

ಟರ್ಮಿನಲ್ ಪಕ್ಕದಲ್ಲಿ ೧೫೩೭ರಲ್ಲಿ ಬೆಂಗಳೂರಿನ ಸಂಸ್ಥಾಪಕ ನಾಡಪ್ರಭು ಕೆಂಪೇಗೌಡ ಅವರ ೧೦೮ ಅಡಿ ಎತ್ತರದ ಬೃಹತ್ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಇದು ಅವರ ಅತಿ ಎತ್ತರದ ಕಂಚಿನ ಪ್ರತಿಮೆಯಾಗಿದ್ದು, ಅವರ ಕೈಯಲ್ಲಿರುವ ಕತ್ತಿ ಸುಮಾರು ನಾಲ್ಕು ಟನ್ ತೂಕವಿದೆ.

______________________

ರಾಜ್ಯದ ಕಾಂಗ್ರೆಸ್ ಸರ್ಕಾರವು ರೈತರ ಸಮಸ್ಯೆಗಳಿಗೆ ಸ್ಪಂದಿಸದೆ ಅನಗತ್ಯವಾದ ವಿಚಾರಗಳನ್ನು ಚರ್ಚಿಸುತ್ತ ಕಾಲಹರಣ ಮಾಡುತ್ತಿದೆ ಎಂದು ಜೆ.ಡಿ.ಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದ್ದಾರೆ.

ಜಿಲ್ಲೆಯ ಕಡೂರು ಪಟ್ಟಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯ ಸರ್ಕಾರವು ಬೆಳೆ ನಷ್ಟ ಉಂಟಾಗಿರುವ ರೈತರಿಗೆ ಬರ ಪರಿಹಾರವಾಗಿ ಎಕರೆಗೆ ೨ ಸಾವಿರದ ೫೦೦ ಘೋಷಣೆ ಮಾಡಿದೆ. ಆದರೆ ಇಲ್ಲಿವರೆಗೆ ರೈತರ ಖಾತೆಗಳಿಗೆ ಹಣ ಜಮೆ ಆಗಿಲ್ಲ. ರೈತರು ಬೆಳೆ ಬೆಳೆಯಲು ಎಕರೆಗೆ ೨೫ ಸಾವಿರದಷ್ಟು ಹಣ ಖರ್ಚಾಗಿದೆ ಅಷ್ಟಾದರು ನೀಡಿದ್ದರೆ ನಷ್ಟ ಅನುಭವಿಸಿದವರಿಗೆ ಅನುಕೂಲವಾಗಲಿದೆ ಎಂದರು.

______________________

ವಿಜಯವಾಡದ ಮುಲಪಾಡು ಡಾ.ಗೋಕರಾಜು ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಕ್ರಿಕೆಟ್ ಪಂದ್ಯದಲ್ಲಿ ಆಂಧ್ರ ವಿರುದ್ಧ ಕರ್ನಾಟಕ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೮೨.೨ ಓವರ್‌ಗಳಲ್ಲಿ ೨೭೪ ರನ್ ಮಾಡಿದೆ.

ನಾಯಕ ರವಿಚಂದ್ರನ್ ಸ್ಮರಣ್ ೧೨೬ ಹಾಗೂ ಕೃಷ್ಣನ್ ಶ್ರೀಜಿತ್ ೫೮, ಮಾಧವ್ ಬಜಾಜ್ ೩೩ ರನ್ ಗಳಿಸಿದರು. ಆಂಧ್ರ ತಂಡದ ಪರ ತ್ರಿಪುರಣ ವಿಜಯ್ ೫ ವಿಕೆಟ್ ಪಡೆದರು.

ದಿನದಾಟದ ಮುಕ್ತಾಯಕ್ಕೆ ಆಂಧ್ರ ೫ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೬ ರನ್ ಮಾಡಿದೆ.

____________ ಮುಕ್ತಾಯ ___________